**National**
**Kannada**
**08.03.2026 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ನವದೆಹಲಿಯಲ್ಲಿಂದು 33 ಸಾವಿರದ 500 ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ಸಂಸತ್ತಿನ ಬಜೆಟ್ ಅಧಿವೇಶನದ ಎರಡನೇ ಹಂತ ನಾಳೆಯಿಂದ ಆರಂಭ
3. ವಿವಿಧ ವಲಯಗಳಲ್ಲಿ ಮುಂಚೂಣಿಯಲ್ಲಿ ಮಹಿಳೆಯರು – ರಾಷ್ಟ್ರಪತಿ ದ್ರೌಪದಿ ಮುರ್ಮು
4. ಐಸಿಸಿ ಟಿ–20 ವಿಶ್ವಕಪ್ ಕ್ರಿಕೆಟ್: ಫೈನಲ್ ಪಂದ್ಯದಲ್ಲಿಂದು ಭಾರತದ ವಿರುದ್ಧ ಟಾಸ್ ಗೆದ್ದ ನ್ಯೂಜಿಲೆಂಡ್ ಫೀಲ್ಡಿಂಗ್ ಆಯ್ಕೆ

*************

ನವದೆಹಲಿಯಲ್ಲಿ ಇಂದು ಸುಮಾರು 33 ಸಾವಿರದ 500 ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೆಹಲಿಯಲ್ಲಿನ ಸೌಲಭ್ಯಗಳು ಮತ್ತು ಮೂಲಸೌಕರ್ಯಗಳನ್ನು ಸ್ಥಿರವಾಗಿ ಬಲಪಡಿಸಲಾಗುತ್ತಿದೆ ಮತ್ತು ವಿಸ್ತರಿಸಲಾಗುತ್ತಿದೆ. ಇಂದು ಪ್ರಾರಂಭಿಸಲಾದ ಯೋಜನೆಗಳು, ಮೂಲಸೌಕರ್ಯವನ್ನು ಬಲಪಡಿಸುತ್ತವೆ, ಸಂಪರ್ಕವನ್ನು ಸುಧಾರಿಸುತ್ತವೆ ಮತ್ತು ನಗರದ ಜನರ ಜೀವನ ಸುಲಭತೆಯನ್ನು ಹೆಚ್ಚಿಸುತ್ತವೆ. ಇಂದು ತೆರೆಯಲಾದ ಹೊಸ ಮೆಟ್ರೋ ವಿಭಾಗವು ರಾಷ್ಟ್ರ ರಾಜಧಾನಿಯ ಲಕ್ಷಾಂತರ ನಿವಾಸಿಗಳಿಗೆ ಗಮನಾರ್ಹ ಪ್ರಯೋಜನವನ್ನು ನೀಡುತ್ತದೆ ಎಂದು ಹೇಳಿದರು.

ಭಾರತವು ಮಹಿಳಾ ಸಬಲೀಕರಣದಲ್ಲಿ ಹೊಸ ಅಧ್ಯಾಯ ಬರೆಯುತ್ತಿದೆ. ದೇಶದ ಅಭಿವೃದ್ಧಿಯಲ್ಲಿ ಮಹಿಳೆಯರು ಪ್ರಮುಖ ಪಾತ್ರ ವಹಿಸುತ್ತಿದ್ದಾರೆ ಎಂದರು.

ಪಶ್ಚಿಮ ಬಂಗಾಳದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಕಾರ್ಯಕ್ರಮದಲ್ಲಿನ ಲೋಪಗಳ ಕುರಿತು ಪ್ರತಿಕ್ರಿಯಿಸಿದ ಪ್ರಧಾನಿ ಅವರು, ಪಶ್ಚಿಮ ಬಂಗಾಳದ ಟಿಎಂಸಿ ಸರ್ಕಾರ ರಾಷ್ಟ್ರಪತಿ ಅವರನ್ನು ಅವಮಾನಿಸಿದೆ. ಅವರು ಬುಡಕಟ್ಟು ಸಮುದಾಯದ ಪ್ರಮುಖ ಉತ್ಸವದಲ್ಲಿ ಭಾಗವಹಿಸಲು ಪಶ್ಚಿಮ ಬಂಗಾಳಕ್ಕೆ ತೆರಳಿದ್ದರು. ಆದರೆ ರಾಷ್ಟ್ರಪತಿಗಳನ್ನು ಗೌರವಿಸುವ ಬದಲು ಟಿಎಂಸಿ ಕಾರ್ಯಕ್ರಮವನ್ನು ಬಹಿಷ್ಕರಿಸಿತು ಎಂದು ಹೇಳಿದರು.

ರಾಷ್ಟ್ರಪತಿ ದ್ರೌಪದಿ ಮುರ್ಮು ಸ್ವತಃ ಬುಡಕಟ್ಟು ಸಮುದಾಯದವರು ಮತ್ತು ಸಂತಲ್ ಬುಡಕಟ್ಟು ಸಮಾಜದ ಅಭಿವೃದ್ಧಿಯ ಬಗ್ಗೆ ಯಾವಾಗಲೂ ಕಾಳಜಿ ವ್ಯಕ್ತಪಡಿಸಿದ್ದಾರೆ. ಆದರೆ, ಇದು ರಾಷ್ಟ್ರಪತಿಗಳಿಗೆ ಮಾಡಿದ ಅವಮಾನ ಮಾತ್ರವಲ್ಲದೆ, ದೇಶದ ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಶ್ರೇಷ್ಠ ಸಂಪ್ರದಾಯಗಳಿಗೆ ಮಾಡಿದ ಅವಮಾನ ಎಂದು ಪ್ರಧಾನಿ ನರೇಂದ್ರ ಮೋದಿ ದೂರಿದರು.

*************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭೇಟಿಯ ಸಂದರ್ಭದಲ್ಲಿ ಪಶ್ಚಿಮ ಬಂಗಾಳದ ಟಿಎಂಸಿ ಸರ್ಕಾರ ಶಿಷ್ಟಾಚಾರವನ್ನು ಪಾಲಿಸದೇ ಇರುವುದಕ್ಕಾಗಿ ಮತ್ತು ನಿನ್ನೆ ಪಶ್ಚಿಮ ಬಂಗಾಳದಲ್ಲಿ ನಡೆದ ಅಂತಾರಾಷ್ಟ್ರೀಯ ಸಂತಲ್ ಸಮ್ಮೇಳನದ ಸ್ಥಳವನ್ನು ಹಠಾತ್ತನೆ ಬದಲಾಯಿಸಿದ್ದನ್ನು ಬಿಜೆಪಿ ಟೀಕಿಸಿದೆ.

ನವದೆಹಲಿಯಲ್ಲಿ ಇಂದು ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ಹಿರಿಯ ನಾಯಕ ರವಿಶಂಕರ್ ಪ್ರಸಾದ್, ಟಿಎಂಸಿ ಸೇರಿದಂತೆ ವಿರೋಧ ಪಕ್ಷಗಳು ಸಂವಿಧಾನವು ಅಪಾಯದಲ್ಲಿದೆ ಎಂದು ಆರೋಪಿಸಿದ್ದಾರೆ. ಆದರೆ ಟಿಎಂಸಿ,

ತನ್ನ ನಡವಳಿಕೆಯ ಮೂಲಕ ದೇಶದ ಅತ್ಯುನ್ನತ ಸಾಂವಿಧಾನಿಕ ಹುದ್ದೆಗೆ ಅಗೌರವ ತೋರಿದೆ ಎಂದು ದೂರಿದ ಅವರು, ಇದಕ್ಕಾಗಿ ಮಮತಾ ಬ್ಯಾನರ್ಜಿ ನೇತೃತ್ವದ ಪಶ್ಚಿಮ ಬಂಗಾಳ ಸರ್ಕಾರವನ್ನು ಖಂಡಿಸಿದರು.

*************

ಸಂಸತ್ತಿನ ಬಜೆಟ್ ಅಧಿವೇಶನದ ಎರಡನೇ ಹಂತ ನಾಳೆಯಿಂದ ಪ್ರಾರಂಭವಾಗಲಿದ್ದು, ಏಪ್ರಿಲ್ 2 ರವರೆಗೆ ನಡೆಯಲಿದೆ.

ಸ್ಪೀಕರ್ ಓಂ ಬಿರ್ಲಾ ಅವರ ಪದಚ್ಯುತಿ ಕೋರಿ ಲೋಕಸಭೆಯಲ್ಲಿ ನಾಳೆ ನಿರ್ಣಯ ಮಂಡನೆಗೆ ಬರಲಿದೆ.

ಕಳೆದ ತಿಂಗಳು ನಡೆದ ಬಜೆಟ್ ಅಧಿವೇಶನದ ಮೊದಲ ಹಂತದಲ್ಲಿ, ವಿರೋಧ ಪಕ್ಷವು ಲೋಕಸಭಾ ಕಾರ್ಯದರ್ಶಿಗೆ ಸ್ಪೀಕರ್ ಅವರನ್ನು ಪದಚ್ಯುತಗೊಳಿಸುವಂತೆ ಕೋರಿ ಅವಿಶ್ವಾಸ ನಿರ್ಣಯದ ನೋಟಿಸ್ ಸಲ್ಲಿಸಿತ್ತು. ಸ್ಪೀಕರ್ ಪಕ್ಷಪಾತದಿಂದ ವರ್ತಿಸುತ್ತಿದ್ದಾರೆ ಎಂದು ಆರೋಪಿಸಿತ್ತು.

ಇದಕ್ಕೆ ಕಾಂಗ್ರೆಸ್, ಸಮಾಜವಾದಿ ಪಕ್ಷ, ಡಿಎಂಕೆ ಮತ್ತು ಇತರ ಪಕ್ಷದ ಸದಸ್ಯರು ಸೇರಿದಂತೆ 118 ಸಂಸದರು ಸಹಿ ಹಾಕಿದ್ದರು.

ಈ ನೋಟಿಸ್ ಅನ್ನು ಮೂವರು ಕಾಂಗ್ರೆಸ್ ಸದಸ್ಯರಾದ ಮೊಹಮ್ಮದ್ ಜಾವೇದ್, ಕೆ.ಸುರೇಶ್ ಮತ್ತು ಮಲ್ಲು ರವಿ ಮಂಡಿಸಲಿದ್ದಾರೆ.

ಏತನ್ಮಧ್ಯೆ, ಬಿಜೆಪಿ ಮತ್ತು ಕಾಂಗ್ರೆಸ್ ತಮ್ಮ ಪಕ್ಷದ ಲೋಕಸಭಾ ಸದಸ್ಯರಿಗೆ ವಿಪ್ ಜಾರಿ ಮಾಡಿದ್ದು, ನಾಳೆ ಮತ್ತು ನಾಡಿದ್ದು ಸದನದಲ್ಲಿ ಹಾಜರಿರುವಂತೆ ನಿರ್ದೇಶಿಸಿವೆ.

*************

ಮಹಿಳೆಯರಿಗೆ ಅವಕಾಶಗಳು ಮತ್ತು ಬೆಂಬಲ ನೀಡಿದಾಗ, ಅವರು ಪ್ರತಿಯೊಂದು ಕ್ಷೇತ್ರದಲ್ಲೂ ಶ್ರೇಷ್ಠತೆಯನ್ನು ಸಾಧಿಸುತ್ತಾರೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಸಂದರ್ಭದಲ್ಲಿ ನಡೆದ ರಾಷ್ಟ್ರೀಯ ಮಟ್ಟದ ಆಚರಣೆಯನ್ನುದ್ದೇಶಿಸಿ ಮಾತನಾಡಿದ ರಾಷ್ಟ್ರಪತಿಗಳು, ಉದ್ಯಮಶೀಲತೆ ಅಥವಾ ಕಾರ್ಪೊರೇಟ್ ವಲಯ ಇರಲಿ, ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರು ಮುನ್ನಡೆ ಸಾಧಿಸಿದ್ದಾರೆ ಎಂದರು.

ಭಾರತ, ಮಹಿಳೆಯರ ನೇತೃತ್ವದ ಅಭಿವೃದ್ಧಿಯತ್ತ ವೇಗವಾಗಿ ಸಾಗುತ್ತಿದೆ ಮತ್ತು ಕಾರ್ಯಪಡೆಯಲ್ಲಿ ಮಹಿಳೆಯರ ಭಾಗವಹಿಸುವಿಕೆ ಹೆಚ್ಚಾಗಿದೆ. ಬೇಟಿ ಬಚಾವೊ ಬೇಟಿ ಪಡಾವೊ, ಪ್ರಧಾನ ಮಂತ್ರಿ ಮುದ್ರಾ ಯೋಜನೆ ಮತ್ತು ಮಿಷನ್ ಶಕ್ತಿ ಮುಂತಾದ ಯೋಜನೆಗಳು ಮಹಿಳೆಯರ ಸಬಲೀಕರಣಕ್ಕೆ ಕಾರಣವಾಗಿವೆ ಎಂದು ಅವರು ತಿಳಿಸಿದರು.

ಶಿಕ್ಷಣದಲ್ಲಿ ಮಹಿಳೆಯರ ಭಾಗವಹಿಸುವಿಕೆ ಹೆಚ್ಚುತ್ತಿದೆ ಮತ್ತು ದೇಶವು ಶಾಲಾ ಶಿಕ್ಷಣದಲ್ಲಿ ಲಿಂಗ ಸಮಾನತೆಯನ್ನು ಸಾಧಿಸಿದೆ. ದೇಶದ ಹೆಣ್ಣುಮಕ್ಕಳು ಕ್ರೀಡೆಗಳಲ್ಲಿಯೂ ಅಸಾಧಾರಣವಾಗಿ ಉತ್ತಮ ಪ್ರದರ್ಶನ ನೀಡುತ್ತಿದ್ದಾರೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

ಈ ಸಂದರ್ಭದಲ್ಲಿ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ ಉಪಸ್ಥಿತರಿದ್ದರು.

*************

ಮಹಿಳೆಯರ ಸಬಲೀಕರಣ ಮತ್ತು ಸ್ವಾವಲಂಬನೆಯ ಮೂಲಕ ಭಾರತ ಮುಂದುವರಿಯುತ್ತಿದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದ್ದಾರೆ.

ಇಂದು ತ್ರಿಪುರಾದ ಹಪಾನಿಯಾದಲ್ಲಿರುವ ಅಂತಾರಾಷ್ಟ್ರೀಯ ಪ್ರದಶನ ಮೈದಾನದಲ್ಲಿ ಲಖ್‌ಪತಿ ದೀದಿಗಳು ಮತ್ತು ಸ್ವ-ಸಹಾಯ ಗುಂಪಿನ ಸದಸ್ಯರೊಂದಿಗೆ ಸಂವಾದ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ಪ್ರತಿಯೊಬ್ಬ

ನಾಗರಿಕರಿಗೂ ಸಮಾನ ಅವಕಾಶಗಳನ್ನು ಒದಗಿಸುವ ಪ್ರಧಾನಿ ನರೇಂದ್ರ ಮೋದಿಯವರ ದೃಷ್ಟಿಕೋನವನ್ನು ಅನುಷ್ಠಾನಗೊಳಿಸುವಲ್ಲಿ ತ್ರಿಪುರಾ ಸರ್ಕಾರ ಪ್ರಮುಖ ಪಾತ್ರ ವಹಿಸುತ್ತಿದೆ ಎಂದರು.

ಈ ಸಂದಭದಲ್ಲಿ ತ್ರಿಪುರಾ ರಾಜ್ಯಪಾಲ ಇಂದ್ರಸೇನ ರೆಡ್ಡಿ ನಲ್ಲು, ಮುಖ್ಯಮಂತ್ರಿ ಡಾ. ಮಾಣಿಕ್ ಸಹಾ ಉಪಸ್ಥಿತರಿದ್ದರು. ನಂತರ, ಉಪರಾಷ್ಟ್ರಪತಿಗಳು ಸ್ವ-ಸಹಾಯ ಗುಂಪುಗಳು ತಯಾರಿಸಿದ ಉತ್ಪನ್ನಗಳನ್ನು ಪ್ರದರ್ಶಿಸುವ ಮಳಿಗೆಗಳಿಗೆ ಭೇಟಿ ನೀಡಿದರು.

*************

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ 'ಸಬ್ ಕಾ ಸಾಥ್ ಸಬ್ ಕಾ ವಿಕಾಸ್–ಜನರ ಆಕಾಂಕ್ಷೆಗಳನ್ನು ಪೂರೈಸುವುದು' ಎಂಬ ವಿಷಯದ ಕುರಿತು ಬಜೆಟ್ ನಂತರದ ವೆಬಿನಾರ್ ಅನ್ನು ಉದ್ದೇಶಿಸಿ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಮಾತನಾಡಲಿದ್ದಾರೆ.

ಈ ವಿಷಯದ ಅಡಿಯಲ್ಲಿ, ಶಿಕ್ಷಣ ಮತ್ತು ಕೌಶಲ್ಯ, ಆರೋಗ್ಯ ಮತ್ತು ಆಯುಷ್, ಪ್ರವಾಸೋದ್ಯಮ ಮತ್ತು ಆತಿಥ್ಯ ಸೇರಿದಂತೆ ಇತರ ಕ್ಷೇತ್ರಗಳಲ್ಲಿ ವಿವಿಧ ವಿಚಾರಗೋಷ್ಠಿಗಳನ್ನು ಆಯೋಜಿಸಲಾಗಿದೆ. ಶಿಕ್ಷಣದಿಂದ ಉದ್ಯೋಗಕ್ಕೆ ಮಾರ್ಗಗಳನ್ನು ಬಲಪಡಿಸುವುದು, ಅನಿಮೇಷನ್ ಅಭಿವೃದ್ಧಿ, ಗೇಮಿಂಗ್ ಮತ್ತು ಕಾಮಿಕ್ಸ್, ಈಶಾನ್ಯ ಪ್ರದೇಶದಲ್ಲಿ ಬೌದ್ಧ ಕೇಂದ್ರಗಳು ಮತ್ತು ಸಾಂಸ್ಕೃತಿಕ ಪ್ರವಾಸೋದ್ಯಮ ಪ್ರಚಾರದಂತಹ ಉಪಕ್ರಮಗಳನ್ನು ಈ ಚರ್ಚೆಗಳು ಒಳಗೊಂಡಿರುತ್ತವೆ.

ಪರಿಣಾಮಕಾರಿ ಅನುಷ್ಠಾನಕ್ಕೆ ಅನುಕೂಲವಾಗುವ ಮತ್ತು ಸಮಗ್ರ ಬೆಳವಣಿಗೆ ಮತ್ತು ಅಭಿವೃದ್ಧಿಯತ್ತ ಪ್ರಗತಿಯನ್ನು ವೇಗಗೊಳಿಸಲು ಸಹಾಯ ಮಾಡುವ ಪ್ರಾಯೋಗಿಕ ಶಿಫಾರಸುಗಳಿಗೆ ಈ ಚರ್ಚೆಗಳು ಕಾರಣವಾಗುವ ನಿರೀಕ್ಷೆಯಿದೆ.

*************

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಸಿಸಿ ಪುರುಷರ ಟಿ–20 ವಿಶ್ವಕಪ್ ಕ್ರಿಕೆಟ್‌ನ ಫೈನಲ್ ಪಂದ್ಯದಲ್ಲಿ ಭಾರತ ಹಾಗೂ ನ್ಯೂಜಿಲೆಂಡ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ನ್ಯೂಜಿಲೆಂಡ್ ಫೀಲ್ಡಿಂಗ್ ಆಯ್ದುಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ಭಾರತ, ಇತ್ತೀಚಿನ ವರದಿ ಬಂದಾಗ 7.3 ಓವರ್‌ಗಳಲ್ಲಿ 1 ವಿಕೆಟ್ ನಷ್ಟಕ್ಕೆ 102 ರನ್ ಗಳಿಸಿ ಆಡುತ್ತಿದೆ.

ಟಿ–20 ವಿಶ್ವಕಪ್ ಇತಿಹಾಸದಲ್ಲಿ ಭಾರತ ತಂಡ, ಫೈನಲ್‌ಗೆ ಒಟ್ಟು 4ನೇ ಬಾರಿ ಅರ್ಹತೆ ಪಡೆದಿದ್ದು, ಈವರೆಗೆ 2 ಬಾರಿ ಟ್ರೋಫಿ ತನ್ನದಾಗಿಸಿಕೊಂಡಿದೆ.

ವಿಶೇಷವಾಗಿ 2007ರಲ್ಲಿ ದಕ್ಷಿಣ ಆಫ್ರಿಕಾ ಅತಿಥ್ಯದಲ್ಲಿ ನಡೆದ ಟಿ–20 ವಿಶ್ವಕಪ್‌ನ ಉದ್ಘಾಟನಾ ಆವೃತ್ತಿಯಲ್ಲಿ ಭಾರತ ಗೆದ್ದಿತ್ತು. ನಂತರ 2024ರಲ್ಲಿ ಟ್ರೋಫಿ ತನ್ನದಾಗಿಸಿಕೊಂಡಿತ್ತು.

*************

ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆಜ ಆಲ್ ಇಂಗ್ಲೆಂಡ್ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನ ಪುರುಷರ ಸಿಂಗಲ್ಸ್ ವಿಭಾಗದ ಫೈನಲ್ ಪಂದ್ಯದಲ್ಲಿ ಭಾರತದ ಲಕ್ಷ್ಯ ಸೇನ್ ವಿರುದ್ಧ ಚೈನೀಸ್ ತೈಪೆಯ ಲಿನ್ ಚುನ್–ಯಿ ಗೆಲುವು ಸಾಧಿಸಿದ್ದಾರೆ.

ಲಿನ್ ಚುನ್–ಯಿ ಅವರು 21–15 ಮತ್ತು 22–20 ಸೆಟ್‌ಗಳಿಂದ ಲಕ್ಷ್ಯ ಸೇನ್ ಅವರನ್ನು ಮಣಿಸಿದರು.

*************

ಕಲಬುರಗಿಯಲ್ಲಿ ನಡೆದ ಐಟಿಎಫ್‌ಡಬ್ಲ್ಯು 35 ಟೆನಿಸ್ ಪಂದ್ಯಾವಳಿಯ ಮಹಿಳಾ ಸಿಂಗಲ್ಸ್ ವಿಭಾಗದ ಫೈನಲ್‌ನಲ್ಲಿ ಭಾರತದ ವೈಷ್ಣವಿ ಅಡ್ಕರ್ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ.

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ನಡೆದ ಈ ರೋಚಕ ಫೈನಲ್ ಹಣಾಹಣಿಯಲ್ಲಿ, ಮೂರನೇ ಶ್ರೇಯಾಂಕಿತ ವೈಷ್ಣವಿ ಅವರು ಅನುಭವಿ ಆಟಗಾರ್ತಿ ಭಾರತದವರೇ ಆದ ಅಂಕಿತಾ ರೈನಾ ಅವರನ್ನು 7–6, 6–4 ನೇರ ಸೆಟ್‌ಗಳಿಂದ ಪರಾಭವಗೊಳಿಸಿ, ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡರು.

ಮೊದಲ ಸೆಟ್‌ನಲ್ಲಿ ತೀವ್ರ ಪೈಪೋಟಿ ಎದುರಾಗಿ ಪಂದ್ಯ ಟೈ–ಬ್ರೇಕರ್ ಹಂತಕ್ಕೆ ತಲುಪಿದರೂ, ಅಮೋಘ ಸಂಯಮ ಪ್ರದರ್ಶಿಸಿದ ವೈಷ್ಣವಿ, ಸೆಟ್ ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾದರು.

*************

ಕೇರಳ ಕರಾವಳಿಯಿಂದ ಸುಮಾರು 80 ನಾಟಿಕಲ್ ಮೈಲುಗಳಷ್ಟು ದೂರದಲ್ಲಿ ಅಪಘಾತಕ್ಕೀಡಾದ ದೋಣಿಯಲ್ಲಿದ್ದ ಒಂಬತ್ತು ಮೀನುಗಾರರನ್ನು ಭಾರತೀಯ ಕರಾವಳಿ ರಕ್ಷಣಾ ಪಡೆ ರಕ್ಷಿಸಿದೆ.

ಕನ್ಯಾಕುಮಾರಿಯಿಂದ ನಿನ್ನೆ ಹೊರಟಿದ್ದ ಮೀನುಗಾರಿಕಾ ದೋಣಿ, ವಿಳಿಂಜಂನಿಂದ ಸುಮಾರು 80 ನಾಟಿಕಲ್ ಮೈಲುಗಳಷ್ಟು ದೂರದಲ್ಲಿ ವ್ಯಾಪಾರಿ ಹಡಗು ಎಂವಿ ಸೋಲಿಸ್‌ಗೆ ಡಿಕ್ಕಿ ಹೊಡೆದ ನಂತರ ಈ ಅಪಘಾತ ಸಂಭವಿಸಿದೆ ಎಂದು ಪ್ರಾಥಮಿಕ ವರದಿಗಳು ತಿಳಿಸಿವೆ. ಈ ವ್ಯಾಪಾರಿ ಹಡಗು ಓಮನ್‌ನಿಂದ ಕೊಲಂಬೊಗೆ ತೆರಳುತ್ತಿತ್ತು.

*******ಮುಕ್ತಾಯ******